ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	27
ಸದಸ್ಯರ ಹೆಸರು	:	ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವವರು	:	ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
ಉತ್ತರಿಸಬೇಕಾದ ದಿನಾಂಕ	:	29/01/2021

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ವತಿಯಿಂದ ತಾಯಿಯ ಮಡಿಲಿನಿಂದ – ತೊಟ್ಟಿಲವರೆಗೆ ಎಂಬ ತಾಯಿ–ಮಗು ಹಾರೈಕೆಯ ಯೋಜನೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು.)	ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರವು ಮಹಿಳೆಯರು ಮತ್ತು ಮಕ್ಕಳ ಸಮಗ್ರ ಅಭಿವೃದ್ಧಿಗಾಗಿ ಹಾಗೂ ಅಪೌಷ್ಟಿಕತೆಯನ್ನು ನಿವಾರಿಸಲು ಅನುಷ್ಠಾನಗೊಳಿಸಲಾಗಿರುವ ಯೋಜನೆಗಳು ಈ ಕೆಳಕಂಡಂತಿದೆ. • ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಸಾಮಾನ್ಯ ಮಕ್ಕಳಿಗೆ ಪ್ರತಿದಿನ ರೂ.8/–ರಂತೆ ಘಟಕ ವೆಚ್ಚ ಭರಿಸುತ್ತಿದ್ದು, ತೀವ್ರ ಅಪೌಷ್ಟಿಕತೆಯುಳ್ಳ ಮಕ್ಕಳಿಗೆ ರೂ.12/– ರ ಪೂರಕ ಪೌಷ್ಟಿಕ ಆಹಾರವನ್ನು ನೀಡಲಾಗುತ್ತಿದೆ. • 3 ರಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆ ನೀಡಲಾಗುತ್ತಿದೆ. • 6 ತಿಂಗಳಿನಿಂದ 6 ವರ್ಷದ ಮಕ್ಕಳಿಗೆ ವಾರದಲ್ಲಿ 5 ದಿನ 150 ಎಂ.ಎಲ್. ಕೆನೆಭರಿತ ಹಾಲು ನೀಡಲಾಗುತ್ತಿದೆ • ಅತಿ ಕಡಿಮೆ ತೂಕವುಳ್ಳ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 200 ಎಂ.ಎಲ್. ಹಾಲು ಹಾಗೂ ಮೊಟ್ಟೆ ಉಪಯೋಗಿಸದ ಮಕ್ಕಳಿಗೆ ವಾರದಲ್ಲಿ 200 ಎಂ.ಎಲ್. ಹಾಲು ನೀಡಲಾಗುತ್ತಿದೆ • ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರ್ಗಿ, ಯಾದಗಿರಿ, ಕೊಪ್ಪಳ ಹಾಗೂ ರಾಯಚೂರಿನ ಸಾಧಾರಣ ಅಪೌಷ್ಟಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್. ಕೆನೆಭರಿತ ಹಾಲನ್ನು ನೀಡಲಾಗುತ್ತಿದೆ. • ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ಅಂಗನವಾಡಿ ಕೇಂದ್ರಗಳಲ್ಲಿ ಮಧ್ಯಾಹ್ನದ ಬಿಸಿಯೂಟ ನೀಡುವ ಮಾತೃಪೂರ್ಣ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ. • ಗರ್ಭಿಣಿ ಮತ್ತು ಬಾಣಂತಿಯರಿಗೆ ಪೂರಕ ಪೌಷ್ಟಿಕ ಅಹಾರಗಳಾದ ಹಣ್ಣು ತರಕಾರಿ ಇನ್ನಿತರ ಪೌಷ್ಟಿಕ ಆಹಾರ ಸೇವನೆಯ ಉದ್ದೇಶಕ್ಕಾಗಿ ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿಯಲ್ಲಿ ರೂ.5000/– ವನ್ನು ನೀಡುವ ಯೋಜನೆ ಜಾರಿಗೊಳಿಸಲಾಗಿದೆ. • ಉದ್ಯೋಗಸ್ಥ ತಾಯಂದಿರ ಮಕ್ಕಳನ್ನು ದಿನಪೂರ್ತಿ ಶಿಶುಪಾಲನಾ ಕೇಂದ್ರದಲ್ಲಿ ಸುರಕ್ಷಿತವಾಗಿ ನೋಡಿಕೊಂಡು ಮಕ್ಕಳ ಪೌಷ್ಟಿಕ ಹಾಗೂ ಆರೋಗ್ಯ ಗುಣಮಟ್ಟ ಸುಧಾರಿಸಲು ರಾಷ್ಟ್ರೀಯ ಶಿಶುಪಾಲನಾ ಕೇಂದ್ರ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.

		• ವಿವಿಧ ಇಲಾಖೆಯಗಳ ಸಮನ್ವಯತೆಯೊಂದಿಗೆ ಅಪೌಷ್ಠಿಕತೆ ತಡೆಗಟ್ಟಲು ಕೇಂದ್ರ ಮತ್ತು ರಾಜ್ಯ ಸಹಭಾಗಿತ್ವದಲ್ಲಿ ಪೋಷಣ್ ಅಭಿಯಾನ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ. ಅಪೌಷ್ಠಿಕತೆಗೆ ಸಾಮಾಜಿಕ, ಶೈಕ್ಷಣಿಕ, ಕೌಟುಂಬಿಕ, ಅನುವಂಶಿಕ ಇನ್ನಿತರ ಕಾರಣಗಳು ಸಹ ಇರಬಹುದಾಗಿದ್ದು ಈ ನಿಟ್ಟಿನಲ್ಲಿ ಕುಟುಂಬದ ಎಲ್ಲಾ ಸದಸ್ಯರಿಗೂ / ಸಮುದಾಯದವರಿಗೂ ಸಹ ಅಪೌಷ್ಠಿಕತೆ ಕುರಿತಂತೆ ಮತ್ತು ನಿವಾರಣಾ ಮಾರ್ಗೋಪಾಯಗಳ ಕುರಿತಂತೆ ತಿಳುವಳಿಕೆ ನೀಡಲು ಪೋಷಣ್ ಅಬಿಯಾನ ಯೋಜನೆಯಡಿಯಲ್ಲಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು / ಜನಾಂದೋಲನ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. • ತೀವ್ರ ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಯೋಜನೆಯಡಿ ಔಷಧಿ ಹಾಗೂ ಚಿಕಿತ್ಸಾ ಆಹಾರಕ್ಕಾಗಿ (Therapeutic food) ಪ್ರತಿ ಮಗುವಿಗೆ ವಾರ್ಷಿಕ ರೂ.2000/-ಗಳಂತೆ ವೆಚ್ಚ ಭರಿಸಲಾಗುತ್ತಿದೆ. • ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಅಪೌಷ್ಠಿಕ ಮಕ್ಕಳಿಗೆ ಚಿಕಿತ್ಸೆ ನೀಡಲಾಗುತ್ತಿದೆ.
ಆ.	ಕಳೆದ 3 ವರ್ಷಗಳಿಂದ ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ದೊರೆತಿರುವ ಅನುದಾನವೆಷ್ಟು; ಈ ಅನುದಾನವನ್ನು ಯಾವ ರೀತಿಯಲ್ಲಿ ಸದುಪಯೋಗ ಮಾಡಿಕೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು.)	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಅಂಗನವಾಡಿ ಫಲಾನುಭವಿಗಳಿಗೆ ಒದಗಿಸಲಾಗುವ ಯೋಜನೆಗಳನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಕಳೆದ 3 ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನದ ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಿದೆ.
ಇ.	ಇತ್ತೀಚಿನ ಕೋವಿಡ್-19 ಪಿಡುಗು ಹರಡುವಿಕೆಯಿಂದ Immunization, Nutrition ಮತ್ತು Health ಯೋಜನೆಗಳ ಅನುಷ್ಠಾನ ನೆನೆಗುದಿಗೆ ಬಿದ್ದು, ತಾಯಿ-ಮಗು ಹಾರೈಕೆ ಕ್ರಮಗಳಿಗೆ ಹಿನ್ನಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕಾರ್ಯಕ್ರಮಗಳನ್ನು ಸಕಾಲಿಕವಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು? (ವಿವರ ನೀಡುವುದು.)	• ಪ್ರಸ್ತುತ ಕೋವಿಡ್-19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಅಂಗನವಾಡಿ ಕೇಂದ್ರಗಳು ಮುಚ್ಚಿರುವುದರಿಂದ ಅಂಗನವಾಡಿಯ ಎಲ್ಲಾ ಫಲಾನುಭವಿಗಳಿಗೆ ಅವರ ಮನೆ ಬಾಗಿಲಿಗೆ ಪೂರಕ ಪೌಷ್ಠಿಕ ಆಹಾರ ಪದಾರ್ಥಗಳನ್ನು ವಿತರಿಸಲಾಗುತ್ತಿದೆ. ಅಂಗನವಾಡಿ ಕೇಂದ್ರಗಳಲ್ಲಿ ನಿಯಮಿತವಾಗಿ ಮಕ್ಕಳ ಚುಚ್ಚುಮದ್ದು / ಆರೋಗ್ಯ ತಪಾಸಣೆಯನ್ನು ಮಾಡಲಾಗುತ್ತಿದ್ದು, ತೂಕವನ್ನು ಅಳತೆ ಮಾಡಲಾಗುತ್ತಿದೆ.

(ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ,
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು.

ಸಂಖ್ಯೆ :ಮಮಇ 12 ಮಮಅ 2021

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಎ.ತಿಪ್ಪೇಸ್ವಾಮಿ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ

ಸಂಖ್ಯೆ: 27 ಕ್ಕೆ ಅನುಬಂಧ

(ರೂ. ಲಕ್ಷಗಳಲ್ಲಿ)

ಕ್ರ.ಸಂ	ಯೋಜನೆಗಳು	2017-18		2018-19		2019-20	
		ಒದಗಿಸಿರುವ ಅನುದಾನ	ಆರ್ಥಿಕ ವೆಚ್ಚ	ಒದಗಿಸಿರುವ ಅನುದಾನ	ಆರ್ಥಿಕ ವೆಚ್ಚ	ಒದಗಿಸಿರುವ ಅನುದಾನ	ಫಲಾನುಭವಿಗಳ ಸಂಖ್ಯೆ
1	ಶಾಲಾಪೂರ್ವ ಮಕ್ಕಳ ಊಟದ ಯೋಜನೆ (ಕೇಂದ್ರ 50% - ರಾಜ್ಯ 50%) ಮಾತೃಪೂರ್ಣ, ಕ್ಷೀರ ಭಾಗ್ಯ &	14355.00	142029.59	215042.00	156487.68	215042.00	147736.28
2	ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚವನ್ನು ಭರಿಸುವ ಯೋಜನೆ (ಬಾಲಸಂಜೀವಿನಿ)	500.00	335.15	200.00	166.94	200.00	163.20
3	ಪ್ರಾಯ ಪೂರ್ವ ಬಾಲಕಿಯರ ಸಬಲೀಕರಣಕ್ಕಾಗಿ ರಾಜೀವ್ ಗಾಂಧಿ ಯೋಜನೆ (ಸಬಲ) (ಕೇಂದ್ರ 50% - ರಾಜ್ಯ 50%)	423.00	109.73	423.00	12.66	200.00	75.27
4	ಇಂದಿರಾಗಾಂಧಿ ಮಾತೃತ್ವ ಸಹಯೋಗ ಯೋಜನೆ (ಕೇಂದ್ರ 60% - ರಾಜ್ಯ 40%)	1158.00	7917.57	0.00	0.00	0.00	0.00
5	ದುಡಿಯುವ ಮಹಿಳೆಯರ ಮಕ್ಕಳಿಗೆ ಶಿಶುಪಾಲನಾ ಕೇಂದ್ರ (ಕೇಂದ್ರ 60% - ರಾಜ್ಯ 40%-	535.69	468.33	914.00	0.00	1105.98	962.99
6	ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ (ಕೇಂದ್ರ 60% - ರಾಜ್ಯ 40%)	0.00	0.00	10000.00	7228.17	5710.00	22982.74
7	ಪೋಷಣ್ ಅಭಿಯಾನ ಯೋಜನೆ (ಕೇಂದ್ರ 60% - ರಾಜ್ಯ 40%)	0.00	0.00	8757.58	8757.58	12972.15	6575.69
ಒಟ್ಟು		**16971.69**	**150860.37**	**235336.58**	**172653.03**	**235230.13**	**178496.17**